ಕರ್ನಾಟಕ ಸರ್ಕಾರ

**ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ, 6ನೇ ಅಡ್ಡ ರಸ್ತೆ, ಮಲ್ಲೇಶ್ವರಂ ಬೆಂಗಳೂರು-560 003.**

ಸಂಖ್ಯೆ:ಕಶಾಪ&ಮೌನಿಮಂ/ಪರೀಕ್ಷೆ/ಪು.ವಿ.ಅ/2023-24 ದಿನಾಂಕ: 04/10/2023

# ಸು ತ್ತೋ ಲೆ

ವಿಷಯ: ಮಾರ್ಚ್ 2024 ರಲ್ಲಿ ನಡೆಯುವ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಪುನರಾವರ್ತಿತ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸುವ ಕುರಿತು.

ಉಲ್ಲೇಖ:ಸರ್ಕಾರದ ಆದೇಶ ಸಂಖ್ಯೆ ಇಪಿ 203 ಎಸ್ಎಲ್‌ಬಿ 2023 ದಿನಾಂಕ:21/09/2023

*****

ಮೇಲಿನ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ 2023-24 ನೇ ಸಾಲಿನಲ್ಲಿ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಮೂರು ವಾರ್ಷಿಕ ಪರೀಕ್ಷೆಗಳನ್ನು ನಡೆಸಲು ಸರ್ಕಾರವು ಆದೇಶಿಸಿದ್ದು, ಇವುಗಳ ಪೈಕಿ ಮೊದಲನೇ ವಾರ್ಷಿಕ ಪರೀಕ್ಷೆಗೆ ಸಂಬಂಧಿಸಿದಂತೆ ಈ ಕೆಳಕಂಡ ಸೂಚನೆಗಳನ್ನು ನೀಡಲಾಗಿದೆ.

**ಮಾರ್ಚ್ 2024 ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ-1 ಕುರಿತು ಪ್ರಾಂಶುಪಾಲರಿಗೆ ವಿಶೇಷ ಸೂಚನೆಗಳು**

1. 2023ರಲ್ಲಿ ನಡೆದ ದ್ವಿತೀಯ ಪಿಯುಸಿ ವಾರ್ಷಿಕ ಹಾಗೂ ಪೂರಕ ಪರೀಕ್ಷೆಗಳಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳಿಂದ ಮಾರ್ಚ್ 2024 ರಲ್ಲಿ ನಡೆಸುವ ವಾರ್ಷಿಕ ಪರೀಕ್ಷೆಗೆ ಶುಲ್ಕ ಕಟ್ಟಿಸಿಕೊಳ್ಳಲು ದಿನಾಂಕ 04-10-2023 ರಿಂದ ಅವಕಾಶ ಕಲ್ಪಿಸಲಾಗಿದ್ದು, ಅನುತ್ತೀರ್ಣ OMR ಅರ್ಜಿಗಳಿಗಾಗಿ ಕಾಯಬೇಕಾದ ಅವಶ್ಯಕತೆ ಇಲ್ಲ. ಫಲಿತಾಂಶ ಪಟ್ಟಿ ಆಧಾರದ ಮೇರೆಗೆ ಅನುತ್ತೀರ್ಣ ವಿಷಯಗಳಿಗೆ ನಿಯಮಾನುಸಾರ ಪರೀಕ್ಷಾ ಶುಲ್ಕ ಕಟ್ಟಿಸಿಕೊಳ್ಳುವುದು. ಪರೀಕ್ಷಾ ಶುಲ್ಕ ಪಾವತಿಸಿದ ವಿದ್ಯಾರ್ಥಿಗಳ ಮಾಹಿತಿಯನ್ನು KSEAB ಮಂಡಲಿಯ ಜಾಲತಾಣದ PU Exam Portal Login ನಲ್ಲಿ ತುಂಬಿದ ನಂತರ ಅರ್ಜಿಗಳನ್ನು ಉಪನಿರ್ದೇಶಕರ ಕಛೇರಿಗೆ ಒಂದೇ ಕಂತಿನಲ್ಲಿ ಸಲ್ಲಿಸುವುದು.
2. 2023ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೂ ಹಿಂದಿನ ಪರೀಕ್ಷೆಗಳಲ್ಲಿ ಅನುತ್ತೀರ್ಣರಾಗಿರುವ ವಿದ್ಯಾರ್ಥಿಗಳಿಂದ ಮೂಲ OMR/ ಅನುತ್ತೀರ್ಣ ಅರ್ಜಿ ಅಥವಾ ಹಿಂದಿನ MCA (Marks Card Cum Application) ಗಳ ಆಧಾರ ಮೇಲೆ ಪರೀಕ್ಷಾ ಶುಲ್ಕಗಳನ್ನು ಕಟ್ಟಿಸಿಕೊಂಡು KSEAB ಮಂಡಲಿಯ ಜಾಲತಾಣದ PU Exam Portal Login ನಲ್ಲಿ ವಿದ್ಯಾರ್ಥಿಗಳ ಮಾಹಿತಿಯನ್ನು ದಾಖಲಿಸುವುದು.
3. 2023ರ ದ್ವಿತೀಯ ಪಿಯುಸಿ ವಾರ್ಷಿಕ ಹಾಗೂ ಪೂರಕ ಪರೀಕ್ಷೆಗಳಲ್ಲಿ **ಅನುತ್ತೀರ್ಣರಾದ** ವಿದ್ಯಾರ್ಥಿಗಳು ಫಲಿತಾಂಶ ತಿರಸ್ಕರಿಸಿ ಪರೀಕ್ಷೆ ಬರೆಯಲು ಇಚ್ಛಿಸಿದಲ್ಲಿ, ಫಲಿತಾಂಶ ಪಟ್ಟಿ ಆಧಾರದ ಮೇಲೆ ಮಂಡಲಿಯಿಂದ ಫಲಿತಾಂಶ ತಿರಸ್ಕರಣೆ ಅನುಮತಿ ಪಡೆದ ನಂತರ ನಿಯಮಾನುಸಾರ ಫಲಿತಾಂಶ ತಿರಸ್ಕರಣೆಗೆ ನಿಗದಿತ ಶುಲ್ಕವನ್ನು ಪಡೆದು ಅವಕಾಶ ನೀಡುವುದು ಹಾಗೂ KSEAB ಮಂಡಲಿಯ ಜಾಲತಾಣದ PU Exam Portal Login ನಲ್ಲಿ ಮಾಹಿತಿಗಳನ್ನು ದಾಖಲಿಸುವುದು.
4. ಮಾರ್ಚ್ 2023, ಮೇ/ಜೂನ್-2023 ಹಾಗೂ ಆಗಸ್ಟ್/ಸೆಪ್ಟೆಂಬರ್ 2023 ರ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿದ್ದು ಫಲಿತಾಂಶ ತಿರಸ್ಕರಿಸಿ ಮಾರ್ಚ್ 2024ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ ಬರೆಯಲು ಇಚ್ಛಿಸಿದ್ದಲ್ಲಿ, ಅಂತಹ ವಿದ್ಯಾರ್ಥಿಗಳು **ಮೂಲ ಅಂಕಪಟ್ಟಿಗಳ** (Original Marks Card) ಆಧಾರದ ಮೇಲೆ ಮಂಡಲಿಯಿಂದ ಫಲಿತಾಂಶ ತಿರಸ್ಕರಣೆ ಅನುಮತಿ ಪಡೆದ ನಂತರ ನಿಯಮಾನುಸಾರ ಫಲಿತಾಂಶ ತಿರಸ್ಕರಣೆಗೆ ಅವಕಾಶ ನೀಡುವುದು ಹಾಗೂ KSEAB ಮಂಡಲಿಯ ಜಾಲತಾಣದ PU Exam Portal Login ನಲ್ಲಿ ಮಾಹಿತಿಗಳನ್ನು ದಾಖಲಿಸುವುದು.

5. ಸರ್ಕಾರದ ಆದೇಶ ಸಂಖ್ಯೆ: ಇಡಿ 195 ಡಿಜಿಡಿ 2017 ಬೆಂಗಳೂರು ದಿನಾಂಕ 20-03-2018 ರಂತೆ ಶುಲ್ಕ ಹಾಗೂ ಫಲಿತಾಂಶ ತಿರಸ್ಕರಣಾ ಶುಲ್ಕ ಹಾಗೂ ದಂಡ ಶುಲ್ಕಗಳನ್ನು ಪರಿಷ್ಕರಿಸಿದೆ.

**ಮಾರ್ಚ್ 2024 ರಲ್ಲಿ ನಡೆಸಲಾಗುವ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಅನುತ್ತೀರ್ಣ ವಿದ್ಯಾರ್ಥಿಗಳು ಪಾವತಿಸಬೇಕಾದ ಶುಲ್ಕ ಮತ್ತು ಫಲಿತಾಂಶ ತಿರಸ್ಕರಣಾ ಶುಲ್ಕಗಳ ವಿವರ.**

| **ಪರೀಕ್ಷಾ ಶುಲ್ಕ (ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಹಾಗೂ ಪ್ರವರ್ಗ-1ರ ವಿದ್ಯಾರ್ಥಿಗಳನ್ನು ಹೊರತುಪಡಿಸಿ)** | |
|---|---|
| ಒಂದು ವಿಷಯಕ್ಕೆ | ರೂ. 140/- |
| ಎರಡು ವಿಷಯಕ್ಕೆ | ರೂ. 270/- |
| ಮೂರು ಅಥವಾ ಹೆಚ್ಚಿನ ವಿಷಯಗಳು | ರೂ. 400/- |
| ಪರಿಷ್ಟ ಜಾತಿ, ಪರಿಶಿಷ್ಟ ವರ್ಗ ಹಾಗೂ ಪ್ರವರ್ಗ-1ರ ವಿದ್ಯಾರ್ಥಿಗಳು ಸೇರಿದಂತೆ ಎಲ್ಲಾ ವಿದ್ಯಾರ್ಥಿ/ವಿದ್ಯಾರ್ಥಿನಿಯರಿಂದ ಕಡ್ಡಾಯವಾಗಿ ಸಲ್ಲಿಸಬೇಕಾದ ಅಂಕಪಟ್ಟಿ ಶುಲ್ಕ | ರೂ. 50/- |

| **ಫಲಿತಾಂಶ ತಿರಸ್ಕರಣಾ ಶುಲ್ಕ** | |
|---|---|
| ಪ್ರಥಮ ಬಾರಿಗೆ ಒಂದು ವಿಷಯಕ್ಕೆ | ರೂ. 175/- |
| ದ್ವಿತೀಯ/ಅಂತಿಮ ಬಾರಿಗೆ ಒಂದು ವಿಷಯಕ್ಕೆ | ರೂ. 350/- |

ಶುಲ್ಕವನ್ನು ಖಜಾನೆ ಚಲನ್ ಮೂಲಕ "0202-01-101-1-06" (ಇತರೆ ಪರೀಕ್ಷೆ ಶುಲ್ಕ) ಈ ಲೆಕ್ಕ ಶೀರ್ಷಿಕೆಗೆ ಜಮಾ ಮಾಡಬೇಕು.

**ಮಾರ್ಚ್ 2024ರಲ್ಲಿ ನಡೆಸುವ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಅನುತ್ತೀರ್ಣ ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಲು ನಿಗದಿಪಡಿಸಿರುವ ದಿನಾಂಕಗಳು:**

| ಕ್ರ.ಸಂ. | ವಿವರ | ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಲು ಕೊನೆಯ ದಿನಾಂಕ | ಕಾಲೇಜಿನ ಪ್ರಾಂಶುಪಾಲರು ಪರೀಕ್ಷಾ ಶುಲ್ಕವನ್ನು ಖಜಾನೆಗೆ ಸಂದಾಯ ಮಾಡಲು ಕೊನೆಯ ದಿನಾಂಕ | ಅನುತ್ತೀರ್ಣ ಹಾಗೂ ಫಲಿತಾಂಶ ತಿರಸ್ಕರಿಸಿದ ವಿದ್ಯಾರ್ಥಿಗಳ ಮಾಹಿತಿಯನ್ನು ಮಂಡಲಿಯ PU Exam Portal Login ನಲ್ಲಿ Update ಮಾಡಲು ಕೊನೆಯ ದಿನಾಂಕ | ಕಾಲೇಜಿನ ಪ್ರಾಂಶುಪಾಲರು ಪರೀಕ್ಷಾ ಅರ್ಜಿಗಳನ್ನು ಮೂಲ ಚಲನ್ ಸಹಿತ ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ಕಡ್ಡಾಯವಾಗಿ ಸಲ್ಲಿಸಬೇಕಾದ ದಿನಾಂಕ |
|---|---|---|---|---|---|
| 1. | ದಂಡ ಶುಲ್ಕವಿಲ್ಲದೆ | 31-10-2023 | 02-11-2023 | 02-11-2023 | 03-11-2023 |
| 2. | ದಂಡ ಶುಲ್ಕದೊಂದಿಗೆ ರಜಾ ದಿನಗಳನ್ನು ಹೊರತುಪಡಿಸಿ ಪರೀಕ್ಷಾ ಶುಲ್ಕದ ಜೊತೆಗೆ ದಿನವೊಂದಕ್ಕೆ ರೂ. 50-00 ರಂತೆ ಗರಿಷ್ಠ ರೂ. 500-00. | 13-11-2023 | 14-11-2023 | 14-11-2023 | 15-11-2023 |

ಜಿಲ್ಲಾ ಉಪನಿರ್ದೇಶಕರು ಪ್ರಾಂಶುಪಾಲರಿಂದ ಸ್ವೀಕರಿಸಿದ ಪರೀಕ್ಷಾ ಅರ್ಜಿಗಳನ್ನು ಮಂಡಲಿಯ ಜಾಲತಾಣದ PU Exam Portal Login ನಲ್ಲಿ Update ಮಾಡಿರುವುದನ್ನು ಖಾತ್ರಿಪಡಿಸಿಕೊಂಡು ಪ್ರಾಂಶುಪಾಲರಿಂದ Update ಮಾಡಿರುವುದಕ್ಕೆ ಸಂಬಂಧಿಸಿದಂತೆ ಮುಚ್ಚಳಿಕೆ ಪತ್ರ ಪಡೆದ ನಂತರ ಕಾಲೇಜುವಾರು ಕ್ರೋಢೀಕೃತ ವಿದ್ಯಾರ್ಥಿಗಳ ಪಟ್ಟಿ, ಹಣ ಪಾವತಿಸಿರುವ ಮೂಲ ಚಲನ್ ಹಾಗೂ ಮುಚ್ಚಳಿಕೆ ಪತ್ರವನ್ನು ಖುದ್ದಾಗಿ ಕೇಂದ್ರ ಕಛೇರಿಗೆ ದಿನಾಂಕ: 17-11-2023 ರಂದು ಸಲ್ಲಿಸಲು ಸೂಚಿಸಿದೆ.

31/10/23

ಅಧ್ಯಕ್ಷರು,
ಕರ್ನಾಟಕ ಶಾಲಾ ಪರೀಕ್ಷೆ ಮತ್ತು
ಮೌಲ್ಯ ನಿರ್ಣಯ ಮಂಡಲಿ.

**ಪ್ರತಿಗಳು:-**

1. ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) 18ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.
2. ಶಾಲಾ ಶಿಕ್ಷಣ ಇಲಾಖೆಯ (ಪದವಿ ಪೂರ್ವ) ಎಲ್ಲಾ ಜಿಲ್ಲಾ ಉಪನಿರ್ದೇಶಕರಿಗೆ ಮಾಹಿತಿಗಾಗಿ ಹಾಗೂ ಒಂದು ಪ್ರತಿಯನ್ನು ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.
3. ಪದವಿ ಪೂರ್ವ ಶಿಕ್ಷಣ ಬೋಧಿಸುವ ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ (ವಿದ್ಯಾರ್ಥಿಗಳಿಗೆ ಈ ಕುರಿತು ಸೂಕ್ತ ನಿರ್ದೇಶನ ನೀಡಲು)
4. ಸಹಾಯಕ ನಿರ್ದೇಶಕರು, ಗಣಕ ಶಾಖೆ, (ಮಂಡಲಿಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು)
5. ಹೆಚ್ಚುವರಿ/ಕಛೇರಿ ಪ್ರತಿ.